ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ:080-22343980

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು,ದಿನಾಂಕ:24.05.2017.

ಸಂಖ್ಯೆ:ಕಾಶಿಇ/ಶೈವಿ/39/ಉ.ಶಿ.ಅ.ಗ್ರಂ/2016-17

# ಸುತ್ತೋಲೆ

**ವಿಷಯ:** "Changing Scenario of Libraries" ಎಂಬ ವಿಷಯದ ಬಗ್ಗೆ ಒಂದು ದಿನದ ಕಾರ್ಯಾಗಾರಕ್ಕೆ ಗ್ರಂಥಪಾಲಕರನ್ನು ನಿಯೋಜಿಸುವ ಬಗ್ಗೆ.

**ಉಲ್ಲೇಖ:** ನಿರ್ದೇಶಕರು, ಉನ್ನತ ಶಿಕ್ಷಣ ಅಕಾಡೆಮಿ, ಧಾರವಾಡ ಇವರ ಪತ್ರ ಸಂಖ್ಯೆ: ಉಶಿಅ/2017-18/ಗ್ರಂ.ಕಾ, ದಿನಾಂಕ:18.05.2017.

*****

ಉನ್ನತ ಶಿಕ್ಷಣ ಅಕಾಡೆಮಿ, ಧಾರವಾಡ ಇಲ್ಲಿ ರಾಜ್ಯದ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುವ ಗ್ರಂಥಪಾಲಕರಿಗೆ ದಿನಾಂಕ:27.05.2017 ರಂದು "Changing Scenario ofLibraries" ಎಂಬ ವಿಷಯದ ಬಗ್ಗೆ ಒಂದು ದಿನದ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದ್ದು, ಈ ಕಾರ್ಯಾಗಾರದ ಉದ್ಘಾಟನೆಯನ್ನು ಸನ್ಮಾನ್ಯ ಉನ್ನತ ಶಿಕ್ಷಣ ಸಚಿವರು ನೇರವೇರಿಸಲಿದ್ದಾರೆ. ಸದರಿ ಕಾರ್ಯಾಗಾರದಲ್ಲಿ ಭಾಗವಹಿಸಲು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರಂಥಪಾಲಕರಿಗೆ ಅನುಮತಿ ನೀಡಲಾಗಿದೆ. ಸದರಿ ಕಾರ್ಯಾಗಾರದಲ್ಲಿ ಭಾಗವಹಿಸಿದ ಬಗ್ಗೆ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರಿಗೆ ಹಾಜರಾತಿ ಪ್ರಮಾಣ ಪತ್ರವನ್ನು ಒಪ್ಪಿಸುವ ನಿಬಂದನೆಗೊಳಪಟ್ಟು ಅನ್ಯಕಾರ್ಯ ನಿಮಿತ್ತ ರಜೆಯನ್ನು ಮಂಜೂರು ಮಾಡಲಾಗಿದೆ. ಹಾಗೂ ಅಧಿಕೃತ ಭತ್ಯೆಗಳನ್ನು ಪಡೆಯಲು ಅರ್ಹರಿರುತ್ತಾರೆ.

ಕಾರ್ಯಾಗಾರದ ದಿನದಂದು ಶಿಬಿರಾರ್ಥಿಗಳಿಗೆ ಮಧ್ಯಾಹ್ನದ ಊಟದ ವ್ಯವಸ್ಥೆ ಮತ್ತು ಸಾಯಂಕಾಲದ ಚಹಾದ ವ್ಯವಸ್ಥೆ ಅಕಾಡೆಮಿಯ ವತಿಯಿಂದ ಮಾಡಲಾಗಿದ್ದು, ಅಕಾಡೆಮಿಯು ಇನ್ನೂ ಸ್ವಂತ ಕಟ್ಟಡ ಹೊಂದದೇ ಇರುವುದರಿಂದ ಭಾವಹಿಸುವವರಿಗೆ ಪ್ರತ್ಯೇಕ ವಸತಿ ವ್ಯವಸ್ಥೆ ಮಾಡಿರುವುದಿಲ್ಲವಾದ್ದರಿಂದ ಭಾಗವಹಿಸುವ ಶಿಬಿರಾರ್ಥಿಗಳು ಅಗತ್ಯವಿದ್ದಲ್ಲಿ ವಸತಿ ವ್ಯವಸ್ಥೆ ಮಾಡಿಕೊಳ್ಳುವಂತೆ ತಿಳಿಸಲಾಗಿದೆ.

**ಕಾಲೇಜು ಶಿಕ್ಷಣ ನಿರ್ದೇಶಕರು(ಪ್ರ)**

**ಇವರಿಗೆ:**

1. ಜಂಟಿ ನಿರ್ದೇಶಕರು,ಕಾಲೇಜು ಶಿಕ್ಷಣ ಇಲಾಖೆ,ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು ಸದರಿ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸುವುದು.

**ಪ್ರತಿಯನ್ನು:**

1. ನಿರ್ದೇಶಕರು, ಉನ್ನತ ಶಿಕ್ಷಣ ಅಕಾಡೆಮಿ, ಧಾರವಾಡ ಸುವರ್ಣ ಮಹೋತ್ಸವ ಕಟ್ಟಡ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ-580 003.
2. ಕಛೇರಿ ಪ್ರತಿ.